# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ.1418/2016/ಸನಿಕಾಸ-2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:23.6.2017.

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ

**ವಿಷಯು:-** ದೇವನಹಳ್ಳಿ ತಾಲ್ಲೂಕು ಭುವನಹಳ್ಳಿ ಗ್ರಾಮದ ಅಲ್ಲಿ ಇರುವ ಕಟ್ಟಡವನ್ನು ತೆರವುಗೊಳಿಸಿ ಪೂರ್ಣ ರಸ್ತೆಯನ್ನು ಸಾರ್ವಜನಿಕರಿಗೆ ಮುಕ್ತವಾಗಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ **ನಿರ್ದೇಶನ** ನೀಡುವ ಬಗ್ಗೆ.

---

ಶ್ರೀ ಎಂ.ವೆಂಕಟೇಶ್, ತಂದೆ ಮುನಿಶಾಮಪ್ಪ, ದೇವನಹಳ್ಳಿಯ ನಿವಾಸಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ಶ್ರೀ ಜೇಮ್ಸ್, ಪಿ.ಡಿ.ಒ. ಅಣ್ಣೇಶ್ವರ ಗ್ರಾಮ ಪಂಚಾಯತ್, ದೇವನಹಳ್ಳಿ ತಾಲ್ಲೂಕು, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ತಮ್ಮ ದೂರಿನಲ್ಲಿ ದೇವನಹಳ್ಳಿ ತಾಲ್ಲೂಕು ಭುವನಹಳ್ಳಿ ಗ್ರಾಮದ ಸರ್ವೆ ನಂ.31 ವಿಸ್ತೀರ್ಣ 33 ಗುಂಟೆ ಸರ್ಕಾರಿ ಗುಂಡುತೋಪಾಗಿದ್ದು, ಇದರಲ್ಲಿ 12 ಗುಂಟೆ ರಾಷ್ಟ್ರೀಯ ಹೆದ್ದಾರಿ ನಿರ್ಮಾಣಕ್ಕೆ ಸ್ವಾಧೀನವಾಗಿರುತ್ತದೆ. ಇನ್ನುಳಿದ 21 ಗುಂಟೆ ಜಮೀನನ್ನು 2004ರಲ್ಲಿ ಆಗಿನ ಶಾಸಕ ಎಂ.ಮುನಿನರಸಿಂಹಯ್ಯರವರು ಹಾಗೂ ತಾಲ್ಲೂಕು ಆಡಳಿತದವರು ಸೇರಿ ಗುಂಡುತೋಪು ನಶಿಸಿಹೋಗಿದೆಯೆಂದು ಆಶ್ರಯ ಯೋಜನೆಯಡಿಯಲ್ಲಿ ನಿವೇಶನಗಳನ್ನು ಗುರುತಿಸಿ ಈಗಾಗಲೇ ಮನೆ ಮತ್ತು ಕೃಷಿ ಜಮೀನು ಇರುವ ಜನರಿಗೆ ಇಲ್ಲಿ ಅಕ್ರಮವಾಗಿ ನಿವೇಶನಗಳನ್ನು ನೀಡಿರುತ್ತಾರೆ.

ಆದ್ದರಿಂದ ಈ ಬಗ್ಗೆ ತನಿಖೆ ಮಾಡಿ ಸಾರ್ವಜನಿಕ ಜಮೀನನ್ನು ಉಳಿಸಿಕೊಡಬೇಕೆಂದು ಕೋರಿ ದೂರು ಸಲ್ಲಿಸಿದ್ದಾರೆ.

3. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಸರ್ವೆ ನಂ.31ರಲ್ಲಿ ದಿ.18.12.2003ರಂದು ಅಣ್ಣೇಶ್ವರ ಗ್ರಾಮ ಪಂಚಾಯತಿ ಸಭೆಯಲ್ಲಿ ಒಟ್ಟು 21 ಜನರಿಗೆ 27*28 ವಿಸ್ತೀರ್ಣದ ನಿವೇಶನಗಳನ್ನು ವಿಂಗಡಿಸಿ ಸರ್ವಾನುಮತದಿಂದ ಆಯ್ಕೆ ಮಾಡಿ ತಾಲ್ಲೂಕು ಪಂಚಾಯತಿಗೆ ಪಟ್ಟಿಯನ್ನು ಕಳುಹಿಸಿದ್ದು, ಅವರು ದಿ.16.2.2004ರಂದು ಸರ್ವಾನುಮತದಿಂದ ಅಂಗೀಕರಿಸಿ ಮುಂದಿನ ಕ್ರಮಕ್ಕೆ ಶಿಫಾರಸ್ಸು ಮಾಡಿರುತ್ತಾರೆ. ದಿ.11.2.2006ರಂದು 21 ಜನರಿಗೆ ಹಕ್ಕುಪತ್ರಗಳನ್ನು ವಿತರಣೆ ಮಾಡಲಾಗಿದೆ. ಈ ಆಧಾರದ ಮೇಲೆ ಫಲಾನುಭವಿಗಳು ಪಂಚಾಯತಿಯಲ್ಲಿ ಖಾತೆಗಳನ್ನು ಮಾಡಿಸಿಕೊಂಡಿರುತ್ತಾರೆ. ಆದರೆ ಮಾನ್ಯ ಉಪವಿಭಾಗಾಧಿಕಾರಿಗಳು ಹೆದ್ದಾರಿ ಪಕ್ಕದಲ್ಲಿ ಆಶ್ರಯ ಯೋಜನೆಯ ನಿವೇಶನಗಳನ್ನು ನೀಡುವುದು ಸಮಂಜಸವೆನಿಸುವುದಿಲ್ಲವೆಂದು ಅಭಿಪ್ರಾಯಪಟ್ಟ ಮೇರೆಗೆ ಹೆದ್ದಾರಿಗೆ ಸ್ವಾಧೀನಗೊಂಡ ಶೇ.50 ರಷ್ಟು ಜಮೀನನ್ನು ಹೊರತುಪಡಿಸಿ ಇನ್ನುಳಿದ ಜಮೀನಿನಲ್ಲಿ ನೀಡಿದ ನಿವೇಶನಗಳನ್ನು ರದ್ದುಪಡಿಸಿ ಗ್ರಾಮಪಂಚಾಯತಿಯಲ್ಲಿ ನಿರ್ಣಯ ಮಂಡಿಸಿ ತಾಲ್ಲುಕು ಪಂಚಾಯತಿಗೆ ಕಳುಹಿಸುವಂತೆ ಸೂಚಿಸಿರುತ್ತಾರೆ. ದಿ.20.6.2005ರಂದು ಗ್ರಾಮಪಂಚಾಯತಿಯಲ್ಲಿ ನ್ಯಾಯಾಲಯದಲ್ಲಿ ಈ ಪ್ರಕರಣ ಚಾಲ್ತಿಯಲ್ಲಿರುವುದರಿಂದ ಈ ಬಗ್ಗೆ ನಿರ್ಣಯ ತೆಗೆದುಕೊಳ್ಳಲು ಅವಕಾಶವಿಲ್ಲವೆಂದು ಸಭೆಯಲ್ಲಿ ಅಂಗೀಕರಿಸಿ ವರದಿನೀಡಿರುತ್ತಾರೆ.

ದಿ.1.12.2013ರಂದು ಗೌರವಾನ್ವಿತ ಉಪಲೋಕಾಯುಕ್ತರ ಕ್ಯಾಂಪಿನಲ್ಲಿ ವಿತರಿಸಿರುವ ಹಕ್ಕುಪತ್ರಗಳನ್ನು ರದ್ದುಪಡಿಸುವಂತೆ ಆದೇಶ ನೀಡಿರುತ್ತಾರೆ. ಆದ್ದರಿಂದ ಕಳೆದ 15 ವರ್ಷಗಳಿಂದ ಈ ಬಗ್ಗೆ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಇದರಲ್ಲಿ ತಮ್ಮ ಪಾತ್ರವೇನೂ ಇಲ್ಲದ ಕಾರಣ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನ ಅಂಶಗಳನ್ನು ಪುನರುಚ್ಚರಿಸಿರುತ್ತಾರೆ.

5. ದೂರುದಾರರು ಸಲ್ಲಿಸಿದ ದೂರು ಆಕ್ಷೇಪಣೆ, ಪ್ರತ್ಯುತ್ತರ ಮತ್ತು ದಾಖಲೆಗಳನ್ನು ಪರಿಶೀಲಿಸಿದಾಗ, ಸರ್ವೆ ನಂ.31ರಲ್ಲಿ 33 ಗುಂಟೆ ಜಮೀನಿನಲ್ಲಿ ಅರ್ಧ ಭಾಗ ರಾಷ್ಟ್ರೀಯ ಹೆದ್ದಾರಿಗೆ ಸ್ವಾಧೀನವಾಗಿದ್ದು, ಇನ್ನುಳಿದ ಅರ್ಧ ಭಾಗದಲ್ಲಿ 2003ರಲ್ಲಿ ಆಶ್ರಯ ಯೋಜನೆಯಡಿ ನಿವೇಶನಗಳನ್ನು ವಿಂಗಡಿಸಿ 2006ರಲ್ಲಿ ಹಕ್ಕುಪತ್ರಗಳನ್ನು ನೀಡಿರುತ್ತಾರೆ. ಆದರೆ ಮಾನ್ಯ ಉಪವಿಭಾಗಾಧಿಕಾರಿಗಳು ಸ್ಥಳ ಪರಿಶೀಲಿಸಿ ಆಶ್ರಯ ಯೋಜನೆಯಡಿಲ್ಲಿ ನೀಡಿದ ನಿವೇಶನಗಳು ಹೆದ್ದಾರಿ ಪಕ್ಕದಲ್ಲಿರುವುದರಿಂದ ಈ ನಿವೇಶನಗಳನ್ನು ರದ್ದುಗೊಳಿಸಬೇಕೆಂದು ಎಲ್.ಎನ್.ಡಿ.ಸಿ.ಆರ್. 197/2004-05 ದಿ.15.4.2005ರಂದು ತಾಲ್ಲೂಕು ಪಂಚಾಯತಿಗೆ ಪತ್ರ ಬರೆದಿರುತ್ತಾರೆ. ಆದರೆ ಉಪವಿಭಾಗಾಧಿಕಾರಿಗಳಿಗೆ ಈ ನಿವೇಶನಗಳನ್ನು ರದ್ದುಪಡಿಸುವ ಅಧಿಕಾರವಿಲ್ಲವೆಂದು 2006ರಲ್ಲಿ ಹಕ್ಕುಪತ್ರ ನೀಡಲಾಗಿರುತ್ತದೆ. ಅಲ್ಲದೆ ಈ ಫಲಾನುಭವಿಗಳು ಸ್ಥಳೀಕರಾಗಿರುವುದಿಲ್ಲ ಹಾಗೂ ಆರ್ಥಿಕವಾಗಿ ಸ್ಥಿತಿವಂತರಾಗಿರುತ್ತಾರೆಂದು ಮಾನ್ಯ ಉಪವಿಭಾಗಾಧಿಕಾರಿಗಳು ಅಭಿಪ್ರಾಯಪಟ್ಟಿರುತ್ತಾರೆ.

6. ದಿ.25.4.2005ರಂದು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ದೇವನಹಳ್ಳಿ, ಇವರು ಅಣ್ಣೇಶ್ವರ ಗ್ರಾಮಪಂಚಾಯತಿಯ ಕಾರ್ಯದರ್ಶಿಗಳಿಗೆ ಪತ್ರ ಬರೆದು ತಕ್ಷಣವೇ ನಿವೇಶನಗಳನ್ನು ರದ್ದುಪಡಿಸುವ ಬಗ್ಗೆ ಗ್ರಾಮಪಂಚಾಯತಿಯಲ್ಲಿ ನಿರ್ಣಯ ಅಂಗೀಕರಿಸಿ ತಾಲ್ಲೂಕು ಪಂಚಾಯತಿಗೆ ಕಳುಹಿಸಿಕೊಡಬೇಕೆಂದು ಸೂಚಿಸಿರುತ್ತಾರೆ. ಮಾನ್ಯ ಅಪರ ಜಿಲ್ಲಾಧಿಕಾರಿಗಳು, ಬೆಂ.ಗ್ರಾ.ಜಿಲ್ಲೆ ಇವರು ಎಲ್.ಎನ್.ಡಿ(ದೇ)ಎಸ್.ಆರ್.116/2013-14 ದಿ.24.3.2014ರ ಉಪವಿಭಾಗಾಧಿಕಾರಿಗಳಿಗೆ ಬರೆದ ಪತ್ರದಲ್ಲಿ ಇಲ್ಲಿ ನೀಡಿರುವ ಆಶ್ರಯ ಯೋಜನೆಯ ನಿವೇಶನಗಳನ್ನು ರದ್ದುಪಡಿಸಲು ಕ್ರಮಕೈಗೊಳ್ಳಬೇಕೆಂದು ಸೂಚಿಸಿರುತ್ತಾರೆ.

7. ಅದೇ ರೀತಿ ಗೌರವಾನ್ವಿತ ಉಪಲೋಕಾಯುಕ್ತರು 1.12.2013ರಂದು, ಕಾರ್ಯನಿರ್ವಾಹಕ ಅಧಿಕಾರಿಗಳು ತಾಲ್ಲೂಕು ಪಂಚಾಯತಿ, ದೇವನಹಳ್ಳಿ, ಇವರಿಗೆ ಇಲ್ಲಿ ನೀಡಿರುವ ಆಶ್ರಯ ಯೋಜನೆಯ ನಿವೇಶನಗಳನ್ನು ರದ್ದುಪಡಿಸಿ 2 ತಿಂಗಳಲ್ಲಿ ವರದಿ ಸಲ್ಲಿಸುವಂತೆ ಇದೇ ವಿಷಯಕ್ಕೆ ಸಂಬಂಧಿಸಿದಂತೆ ದಾಖಲಾದ ಪ್ರಕರಣ ಬಿಡಿ.2605/2013ರ ಪ್ರಕರಣದಲ್ಲಿ ಆದೇಶ ನೀಡಿರುತ್ತಾರೆ. ಆದಾಗ್ಯೂ ಸಹ ಈ ನಿವೇಶನಗಳನ್ನು ರದ್ದುಗೊಳಿಸುವಲ್ಲಿ ಯಾವುದೇ ಸೂಕ್ತ ಕ್ರಮ ಜರುಗಿಸಿಲ್ಲವೆಂದು ಕಂಡುಬರುತ್ತದೆ.

8. ಆದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1)ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ದೇವನಹಳ್ಳಿ ತಾಲ್ಲೂಕು ಭುವನಹಳ್ಳಿ ಗ್ರಾಮದ ಸರ್ವೆ ನಂ.31ರಲ್ಲಿ ನೀಡಿದ 21 ನಿವೇಶನಗಳ ಹಕ್ಕುಪತ್ರ ಮತ್ತು ಖಾತೆಗಳನ್ನು ರದ್ದುಗೊಳಿಸಿ, ಅಲ್ಲಿ ಯಾರಾದರೂ ವಾಸವಾಗಿದ್ದರೆ ಅವರನ್ನು ತೆರವುಗೊಳಿಸಿ ಸದರಿ ಆಸ್ತಿಯನ್ನು ಅಣ್ಣೇಶ್ವರ ಗ್ರಾಮಪಂಚಾಯತಿ ಸುಪರ್ದಿಗೆ ಪಡೆದುಕೊಳ್ಳುವಂತೆ ಸಂಬಂಧಪಟ್ಟವರಿಗೆ **ನಿರ್ದೇಶನ ನೀಡಲು** ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

9. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ವರದಿ ಸಲ್ಲಿಸಲು ಕೋರಲಾಗಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

Sd/- 23/6/17.

[ ನ್ಯಾಯಮೂರ್ತಿ ಸುಭಾಷ್ ಬಿ ಆಡಿ]

**ಉಪಲೋಕಾಯುಕ್ತರು,**

**ಕರ್ನಾಟಕ ರಾಜ್ಯ.**

23/6